# ಗುಡುಗು-ಸಿಡಿಲು ಆಘಾತದಿಂದ ಪಾರಾಗಲು ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಲಹೆಗಳು

ಕೊಪ್ಪಳ, ಏಪ್ರಿಲ್ 23 : ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಗುಡುಗು ಮತ್ತು ಸಿಡಿಲು ಬಡಿತದಿಂದ ಉಂಟಾಗುವ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಗುಡುಗು ಮತ್ತು ಸಿಡಿಲು ಬಡಿತ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸಾರ್ವಜನಕರು ಅವುಗಳನ್ನು ಕಡ್ಡಾಯವಾಗಿ ಪಾಲಿಸಿ, ನೈಸರ್ಗಿಕ ಅವಘಡಗಳಿಂದ ಆಗುವ ಹಾನಿಯನ್ನು ತಪ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ನಲಿನ್ ಅತುಲ್ ಅವರು ತಿಳಿಸಿದ್ದಾರೆ.

ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಗುಡುಗು ಸಿಡಿಲಿನಿಂದಾಗುವ ಅಪಾಯಗಳನ್ನು ತಗ್ಗಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಸಾರ್ವಜನಕರು ಪಾಲಿಸಬೇಕಾದ ಸಲಹೆ ಸೂಚನೆಗಳು:

ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಮುಖಾಂತರ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದಿಂದ ಬರುವ ಸಂದೇಶಗಳನ್ನು ಗಮನಿಸಬೇಕು. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಳವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗವುದನ್ನು ತಪ್ಪಿಸಬೇಕು. ಗುಡುಗು-ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಾದ ಮನೆಗಳು, ಕಛೇರಿಗಳು, ಅಂಗಡಿಗಳು ಮತ್ತು ಕಿಟಕಿ ಮುಚ್ಚಿರುವಂತಹ ವಾಹನಗಳಲ್ಲಿ ಆಶ್ರಯ ಪಡೆಯಬೇಕು.

ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಖರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿಕೊಂಡು ಆಶ್ರಯ ಪಡೆಯಬೇಕು. ಕೆರೆ ಮತ್ತು ನದಿಗಳು ಹಾಗೂ ಇನ್ನಿತರ ನೀರಿನ ಮೂಲಗಳಿಂದ ತಕ್ಷಣವೇ ದೂರವಿರುವುದು, ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು, ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರಬೇಕು. ಗುಡುಗು - ಸಿಡಿಲಿನ ಮುನ್ಸೂಚನೆ ಅಥವಾ ಮುನ್ನೆಚ್ಚರಿಕೆ ಇದ್ದಲ್ಲಿ ಪ್ರಯಾಣವನ್ನು ಮುಂದೂಡಬೇಕು ಹಾಗೂ ಮನೆಗಳಲ್ಲಿ ಇರಬೇಕು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯಬೇಕು ಹಾಗೂ ವಾಹನ ಕಿಟಕಿಗಳನ್ನು ಮುಚ್ಚಿ ವಾಹನದ ಒಳಗೆ ಇರಬೇಕು. ಮರಗಳು ಮತ್ತು ವಿದ್ಯುತ್ ಲೈನ್‌ಗಳಿಂದ ದೂರ ವಾಹನ



ನಿಲುಗಡೆ ಮಾಡಬೇಕು. ಗುಡುಗು ಸಿಡಿಲಿನ ಸಮಯದಲ್ಲಿ ಗುಂಪಿನಲ್ಲಿದ್ದರೆ ಅಪಾಯವನ್ನು ಕಡಿಮೆ ಮಾಡಲು ಸಾಕಷ್ಟು ಅಂತರವನ್ನು ಕಾಯ್ದುಕೊಳ್ಳಬೇಕು.

ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುತ್ತಿದ್ದರೆ ಮತ್ತು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸಾಕಷ್ಟು ಸಮಯವಿಲ್ಲದಿದ್ದರೆ ಎರಡು ಕಾಲುಗಳನ್ನು ಜೋಡಿಸಿ ಮಂಡಿಯೂರಿ ಕುಳಿತುಕೊಂಡು ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳಬೇಕು. ಮಿಂಚನ್ನು ಆಕರ್ಷಿಸುವಂತಹ ವಿದ್ಯುತ್ ಅಥವಾ ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಅರಣ್ಯ ಪ್ರದೇಶದಲ್ಲಿದ್ದರೆ ಸಣ್ಣ /ಚಿಕ್ಕ ಮರಗಳ ಕೆಳಗೆ ಆಶ್ರಯ ಪಡೆಯಬೇಕು. ಲೋಹದ ವಸ್ತುಗಳನ್ನು ಬಳಸಬಾರದು ಮತ್ತು ಬೈಕುಗಳು, ವಿದ್ಯುತ್ ಅಥವಾ ದೂರವಾಣಿ ಕಂಬಗಳು, ತಂತಿ ಬೇಲಿ, ಯಂತ್ರಗಳು ಇತ್ಯಾದಿಗಳಿಂದ ದೂರವಿರಬೇಕು. ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್ ಗಳನ್ನು ಬಳಸಬಾರದು ಹಾಗೂ ವಿದ್ಯುತ್ ಸಂಪರ್ಕ ಹೊಂದಿರುವ ದೂರವಾಣಿಯನ್ನು ಬಳಸಬಾರದು.

ಕಬ್ಬಿಣದ ಸರಳುಗಳಿಂದ ಕೂಡಿದ ಛತ್ರಿಗಳನ್ನು ಬಳಸಬಾರದು. ಗುಡುಗು ಸಿಡಿಲಿನ ಸಮಯದಲ್ಲಿ ಕಿಟಕಿ, ಬಾಗಿಲುಗಳನ್ನು ಮುಚ್ಚಿ ಬೆಂಕಿ ಮತ್ತು ವಿದ್ಯುತ್ ಶಕ್ತಿ ಸಂಪರ್ಕದಿಂದ ದೂರವಿರಬೇಕು. ಮಕ್ಕಳು, ವಯೋವೃದ್ದರು, ಜಾನುವಾರುಗಳನ್ನು ಹಾಗೂ ಸಾಕು ಪ್ರಾಣಿಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಇರುವಂತೆ ಗಮನಹರಿಸಬೇಕು. ಹಾರುವ ಮತ್ತು ಅಪಘಾತಕ್ಕೆ ಕಾರಣವಾಗಬಹುದಾದ ಮರದ ಕಟ್ಟಿಗೆ ಅಥವಾ ಇತರೆ ಯಾವುದೇ ಅವಶೇಳಗಳನ್ನು ತೆಗೆದುಹಾಕಬೇಕು. ಸಿಡಿಲು ಸಂದರ್ಭದಲ್ಲಿ ಕಟ್ಟಡದ ಕೊಳಾಯಿ ಮತ್ತು ಲೋಹದ ಕೊಳವೆಗಳ ಮೂಲಕ ವಿದ್ಯುತ್ ಹರಿಯುವ ಸಾಧ್ಯತೆ ಇರುವುದರಿಂದ ಸಿಡಿಲು ಉಂಟಾಗುವ ಸಂದರ್ಭದಲ್ಲಿ ಸ್ನಾನ ಅಥವಾ ಶವರ್ ತೆಗೆದುಕೊಳ್ಳಬಾರದು, ಪಾತ್ರೆಗಳನ್ನು ತೊಳೆಯಬಾರದು, ಬಟ್ಟೆ ಒಗೆಯಬಾರದು. ಗುಡುಗು ಸಿಡಿಲಿನ ಸಮಯದಲ್ಲಿ ಮೋಟಾರ್ ಸೈಕಲ್ ಅಥವಾ ಇನ್ನಿತರೆ ಯಾವುದೇ ತೆರೆದ ವಾಹನಗಳ ಸಂಚಾರವನ್ನು ಮಾಡಬಾರದು.

ಆಟದ ಮೈದಾನ, ಉದ್ಯಾನವನಗಳು, ಈಜುಕೊಳ ಮತ್ತು ಕಡಲ ತೀರಗಳಿಗೆ ಹೋಗುವುದನ್ನು ತಪ್ಪಿಸಬೇಕು. ದೋಣಿ ವಿಹಾರ ಅಥವಾ ಈಜುತ್ತಿದ್ದರೆ ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಅರಣ್ಯ ಪ್ರದೇಶದಿಂದ ಗಿಡ ಗಡ್ಡೆಗಳಿಲ್ಲದ ಸ್ವಚ್ಛ ಪ್ರದೇಶದ ಕಡೆಗೆ ಚಲಿಸಬೇಕು. ಮಿಂಚಿನ ಹೊಡೆತದಿಂದಾಗಿ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಯಿರುವುದರಿಂದ ಎಚ್ಚರಿಕೆ ವಹಿಸಬೇಕು. ಗುಡುಗು ಸಿಡಿಲಿನ ಸಮಯದಲ್ಲಿ ಬಯಲು ಪ್ರದೇಶದಲ್ಲಿ ಸಿಲುಕಿಕೊಂಡಿದ್ದರೆ, ತಕ್ಷಣವೇ ಹತ್ತಿರದಲ್ಲೇ ಇರುವ ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆದು ಅಪಾಯದಿಂದ ಪಾರಾಗಬೇಕು. ಮಿಂಚು ಬರುವ ಸಮಯದಲ್ಲಿ ರಬ್ಬರ್ ಸೋಲ್ ಇರುವ ಪಾದರಕ್ಷೆಗಳು ಮತ್ತು ಕಾರಿನ ಚಕ್ರಗಳು ಸುರಕ್ಷಿತವಲ್ಲದ ಕಾರಣ ಅವುಗಳಿಂದ ದೂರವಿರಬೇಕು.

ವಿದ್ಯುತ್ ಸಂಪರ್ಕ ಹೊಂದಿರುವಂತಹ ವಿದ್ಯುತ್ / ಎಲೆಕ್ಟ್ರಿಕಲ್ ಉಪಕರಣಗಳಾದ ಕಂಪ್ಯೂಟರ್, ಲ್ಯಾಪ್‌ಟಾಪ್, ವಿಡಿಯೋ ಗೇಮ್ ಸಾಧನಗಳು, ಮೊಬೈಲ್ ಫೋನ್, ವಾಷಿಂಗ್ ಮಷಿನ್, ಸ್ಟವ್ ಹಾಗೂ ಇತರೆ ವಿದ್ಯುತ್ ಉಪಕರಣಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಬೇಕು. ಬಾಗಿಲುಗಳು, ಕಿಟಕಿಗಳು, ಮಂಟಪಗಳು, ಕಾಂಕ್ರಿಟ್ ನೆಲ, ಬೆಂಕಿಯ ಸ್ಥಳಗಳು, ಸ್ಟವ್‌ಗಳು, ಬಾತ್‌ಟಬ್‌ಗಳು ಅಥವಾ ಇತರೆ ವಿದ್ಯುತ್ ಉಪಕರಣಗಳಿಂದ ದೂರವಿರಬೇಕು.

ಸಿಡಿಲು/ಮಿಂಚು ಬಡಿದಾಗ ಪಾಲಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನ

ಸಿಡಿಲು / ಮಿಂಚು ಬಡಿದ ಸಮಯದಲ್ಲಿ ಪ್ರಾಥಮಿಕವಾಗಿ 112 / 108 ಸಹಾಯವಾಣಿಗೆ ಕರೆ ಮಾಡಬೇಕು. ವೈದ್ಯಕೀಯ ಸಿಬ್ಬಂದಿಯು ಆಗಮಿಸುವ ಮುನ್ನವೇ ನೀಡುವ ಅಗತ್ಯ ಪ್ರಥಮ ಚಿಕಿತ್ಸೆಯಿಂದ ಸಿಡಿಲು / ಮಿಂಚಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಜೀವವನ್ನು ಉಳಿಸಬಹುದಾಗಿದೆ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ದೇಹದಲ್ಲಿ ಯಾವುದೇ ವಿದ್ಯುತ್ ಕಣಗಳು ಸಂಚಾರವಾಗುವುದಿಲ್ಲ. ಆದ್ದರಿಂದ, ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ಮುಟ್ಟಿ ಉಪಚರಿಸುವ ವ್ಯಕ್ತಿಗೆ ಯಾವುದೇ ಅಪಾಯವಿರುವುದಿಲ್ಲ.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಉಸಿರಾಟ ಹಾಗೂ ಎದೆ ಬಡಿತವನ್ನು ಪರೀಕ್ಷಿಸಬೇಕು. ವ್ಯಕ್ತಿಯ ದವಡೆಗೆ ನೇರವಾಗಿ ಕುತ್ತಿಗೆಯಲ್ಲಿರುವ ರಕ್ತನಾಳವನ್ನು ಪರೀಕ್ಷಿಸುವುದರಿಂದ ಸುಲಭವಾಗಿ ನಾಡಿ ಮಿಡಿತವನ್ನು ತಿಳಿಯಬಹುದು. ವ್ಯಕ್ತಿಯಲ್ಲಿ ಉಸಿರಾಟವು ಕಂಡು ಬರದಿದ್ದಲ್ಲಿ ತಕ್ಷಣವೇ ಕೃತಕ ಉಸಿರಾಟ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ವ್ಯಕ್ತಿಯಲ್ಲಿ ಎದೆಬಡಿತವು ಕಂಡು ಬರದಿದ್ದಲ್ಲಿ ತಕ್ಷಣವೇ **Cardiac compressions** ಹಾಗೂ **Cardiopulmonary Resuscitation** ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಕಣ್ಣಿನ ದೃಷ್ಟಿ, ಕಿವಿಕೇಳಿಸುವಿಕೆ ಹಾಗೂ ಮೂಳೆಗಳು ಮುರಿದಿವೆಯೇ ಎಂದು ಪರೀಕ್ಷಿಸಬೇಕು. ಇದರಿಂದ ಪಾರ್ಶ್ವವಾಯು/ ಲಕ್ವಾ ಹೊಡೆಯುವುದನ್ನು ಮತ್ತು ಅಧಿಕ ರಕ್ತಸ್ರಾವದಿಂದ ಉಂಟಾಗುವ ಅಪಾಯಗಳನ್ನು ತಡೆಗಟ್ಟಬಹುದು.

ಸಿಡಿಲು ಬಡಿಯುವ ಸಾಧ್ಯತೆಯು ಮುಂದುವರೆಯುವುದರ ಬಗ್ಗೆ ಈಗಾಗಲೇ ಸಿಡಿಲಿನ ಹೊಡೆತಕ್ಕೆ ಒಳಗಾಗಿರುವ ವ್ಯಕ್ತಿ ಹಾಗೂ ಅವರನ್ನು ರಕ್ಷಿಸುವವರು ಎಚ್ಚರವಹಿಸಬೇಕು. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ಅಪಾಯಕಾರಿ ಸ್ಥಳದಲ್ಲಿದ್ದರೆ, ತಕ್ಷಣವೇ ಅವನನ್ನು / ಅವಳನ್ನು ಸೂಕ್ತ ರಕ್ಷಣಾ ಸ್ಥಳಕ್ಕೆ ಸ್ಥಳಾಂತರಿಸಬೇಕು.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ವಿವಿಧ ರೀತಿಯ ಸುಟ್ಟಗಾಯಗಳಿಂದ ಬಳಲಬಹುದು ಹಾಗೂ ಕಾಣದ ಗಾಯಗಳು/ ಆಘಾತಕ್ಕೆ ಒಳಗಾಗಿರಬಹುದು. ಸಿಡಿಲು ಬಡಿದಿರುವ ವ್ಯಕ್ತಿಯಿರುವ ಸ್ಥಳಕ್ಕೆ ತಲುಪಲು ಹಾಗೂ ಸಿಡಿಲು ಬಡಿತಕ್ಕೆ ಒಳಗಾದ ವ್ಯಕ್ತಿಯ ಆರೋಗ್ಯಸ್ಥಿತಿಯ ಬಗ್ಗೆ ನಿಖರವಾದ ಮಾಹಿತಿ ನೀಡಬೇಕು ಮತ್ತು ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಬೇಕು.

ವಿಪತ್ತು ನಿರ್ವಹಣಾ ಪ್ರಾಧಿಕಾರ ನೀಡಿರುವ ಸಲಹೆ ಸೂಚನೆಗಳನ್ನು ಪಾಲಿಸುವುದರಿಂದ ಗುಡುಗು ಹಾಗೂ ಸಿಡಿಲಿನಿಂದ ಆಗುವ ಪ್ರಾಣ ಹಾನಿ ಹಾಗೂ ಇನ್ನಿತರ ಅವಘಡಗಳಿಂದ ಪಾರಾಗಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತ ಎಣಿಕಾ ಕೇಂದ್ರಕ್ಕೆ ಚುನಾವಣಾ ವೀಕ್ಷಕರೊಂದಿಗೆ ಜಿಲ್ಲಾಧಿಕಾರಿ ಭೇಟಿ

(1 ನೇ ಪುಟದಿಂದ)

ವ್ಯಾಪ್ತಿಯ ಹಡಗಲಿ, ಹಗರಿಬೊಮ್ಮನಹಳ್ಳಿ, ವಿಜಯನಗರ, ಕಂಪ್ಲಿ, ಬಳ್ಳಾರಿ (ಗ್ರಾಮೀಣ), ಬಳ್ಳಾರಿ (ನಗರ), ಸಂಡೂರು ಹಾಗೂ ಕೂಡ್ಲಿಗಿ ಸೇರಿದಂತೆ ಒಟ್ಟು 08 ವಿಧಾನಸಭಾ ಕ್ಷೇತ್ರಗಳ ಮತಯಂತ್ರಗಳನ್ನು ಕಾಲೇಜು ಕಟ್ಟಡದಲ್ಲಿಯೇ ಪ್ರತ್ಯೇಕ ಕೊಠಡಿಗಳಲ್ಲಿ ಸಂಗ್ರಹಿಸಲಾಗುವುದು. ಮತಯಂತ್ರಗಳನ್ನು ಅತ್ಯಂತ ಭದ್ರತೆಯಲ್ಲಿ, ನಿಯಮಾನುಸಾರ ಇರಿಸಲಾಗುವುದು ಎಂದರು.

ಮತಗಳ ಎಣಿಕಾ ಕಾರ್ಯ ಜೂ.04 ರಂದು ಇದೇ ಕಾಲೇಜಿನ ಕಟ್ಟಡದಲ್ಲಿ ನಡೆಯಲಿದ್ದು, ಚುನಾವಣಾ ಆಯೋಗದ ಮಾರ್ಗಸೂಚಿಯನುಸಾರ ಇದಕ್ಕೆ ಬೇಕಾದ ಸಿದ್ಧತೆಗಳನ್ನು ಈಗಾಗಲೆ ಪ್ರಾರಂಭಿಸಲಾಗಿದೆ. ಕಾಲೇಜು ಕಟ್ಟಡದ ನೆಲ ಮಹಡಿ, ಮೊದಲನೆ ಮಹಡಿ ಹಾಗೂ ಎರಡನೆ ಮಹಡಿಯನ್ನು ಸ್ಟ್ರಾಂಗ್ ರೂಂ ಗಾಗಿ ಹಾಗೂ ಮತ ಎಣಿಕಾ ಕಾರ್ಯಗಳಿಗೆ ಬಳಸಿಕೊಳ್ಳಲಾಗುವುದು. ಕಾಲೇಜು ಕಟ್ಟಡ ಸುತ್ತ ಇರುವ ಕಾಂಪೌಂಡ್ ವ್ಯವಸ್ಥೆ, ಕೈಗೊಳ್ಳಲಾಗುವ ಬಂದೋಬಸ್ತ್ ವ್ಯವಸ್ಥೆ ಬಗ್ಗೆ ಜಿಲ್ಲಾಧಿಕಾರಿಗಳು ವಿವರಗಳನ್ನು ಒದಗಿಸಿದರು.

ಬಳ್ಳಾರಿ ಕ್ಷೇತ್ರ ಚುನಾವಣಾ ವೀಕ್ಷಕ ಚಂದ್ರಶೇಖರ ಸಖಮುರಿ ಅವರು, ಎಲ್ಲ ವಿಧಾನಸಭಾ ಕ್ಷೇತ್ರಗಳಿಂದ ಬರುವ ಮತಯಂತ್ರಗಳನ್ನು ಇಡುವ ಸ್ಟ್ರಾಂಗ್ ರೂಂ ಗಳಿಗೆ ಹಾಗೂ ಮತ ಎಣಿಕಾ ಕೊಠಡಿಗಳಿಗೆ ಭೇಟಿ ನೀಡಿ, ಕೈಗೊಳ್ಳಲಾಗುತ್ತಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದರು. ಇಡೀ ಕಾಲೇಜು ಕಟ್ಟಡದ ನೀಲಿ ನಕ್ಷೆಯನ್ನು ಪಡೆದು, ಯಾವ ಯಾವ ಕೊಠಡಿಯಲ್ಲಿ ಯಾವ ಕ್ಷೇತ್ರದ ಮತಯಂತ್ರಗಳನ್ನು ಇರಿಸುವುದು ಹಾಗೂ ಮತ ಎಣಿಕೆ ನಡೆಸಲಾಗುವುದು ಎಂಬುದರ ಮಾಹಿತಿ ಪಡೆದು ಕೂಲಂಕಷವಾಗಿ ಪರಿಶೀಲಿಸಿದರು.

ಸ್ಟ್ರಾಂಗ್ ರೂಂ ಸಿದ್ಧಪಡಿಸುವುದು, ಬಂದೋಬಸ್ತ್ ಹಾಗೂ ಮತ ಎಣಿಕಾ ಕೊಠಡಿಗಳ ಸಿದ್ಧತೆಗಳು, ಅಂಚೆ ಮತಗಳ ಎಣಿಕೆಗೆ ಸಿದ್ಧತೆಗಳು, ಚುನಾವಣಾ ಏಜೆಂಟರು, ಸಿಬ್ಬಂದಿಗಳ ಆಗಮನ, ನಿರ್ಗಮನ ವಿಷಯಗಳು ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಇರಬೇಕು, ಕಟ್ಟಡದಲ್ಲಿ ವಿದ್ಯುತ್ ಸಂಪರ್ಕ ಸುರಕ್ಷತೆ, ಕೊಠಡಿಗಳ ಸುರಕ್ಷತೆ ಕುರಿತು ಅತ್ಯಂತ ಎಚ್ಚರಿಕೆ ವಹಿಸಬೇಕು. ಸುಗಮ ಡಿಮಸ್ಟರಿಂಗ್ ಹಾಗೂ ಮತ ಎಣಿಕಾ ಕಾರ್ಯ ನಡೆಸಲು ಕೆಲವು ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಬಳ್ಳಾರಿ ಲೋಕಸಭಾ ಚುನಾವಣೆಯ ಪೊಲೀಸ್ ವೀಕ್ಷಕ ಧರ್ಮೇಂದ್ರ ಸಿಂಗ್ ಭದೌರಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು ಅವರು ಉಪಸ್ಥಿತರಿದ್ದರು.

## ಎ. 28 ರಂದು ಬೆಳಗಾವಿಗೆ ನರೇಂದ್ರ ಮೋದಿ

(1 ನೇ ಪುಟದಿಂದ)

ಈ ಕಾರ್ಯಕ್ರಮದಲ್ಲಿ ಎರಡೂ ಲೋಕಸಭೆಯ ಅಭ್ಯರ್ಥಿಗಳಾದ ಅಣ್ಣಾಸಾಬ ಜೊಲ್ಲೆ ಹಾಗೂ ಜಗದೀಶ್ ಶೆಟ್ಟರ್ ಅವರು, ವೇದಿಕೆ ಮೇಲೆ ಉಪಸ್ಥಿತರಿರಲಿದ್ದಾರೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ರಾಜ್ಯಾಧ್ಯಕ್ಷ ವಿಜಯಂದ್ರ, ಮಾಜಿ ಸಿಎಂ ಯಡಿಯುರಪ್ಪ, ರಾಜ್ಯ ಚುನಾವಣಾ ಪ್ರಭಾರಿ ರಾಧಾಮೊಹನ ಧಾಸ್ ಬೆಳಗಾವಿ ಜಿಲ್ಲೆಯ ಸಂಸದರು, ಶಾಸಕರು, ಮಾಜಿ ಶಾಸಕರು ಭಾಗವಹಿಸುತ್ತಾರೆ. ಚಿಕ್ಕೋಡಿ ಲೋಕಸಭಾ ಹಾಗೂ ಬೆಳಗಾವಿ ಲೋಕಸಭಾ ಒಳಗೊಂಡಂತೆ ಕಾರ್ಯಕ್ರಮ ಆಗಲಿದೆ. ಈಗಾಗಲೇ ಬೆಳಗಾವಿ ಹೊರವಲಯದ ಮಾಲಿನಿ ಸಿಟಿಯಲ್ಲಿ ಪೆಂಡಾಲ್ ಹಾಕಲು ಪೂಜೆ ಮಾಡಲಾಗಿದೆ ಎಂದು ತಿಳಿಸಿದರು.ಬಿಜೆಪಿ ಮುಖಂಡ ಎಂಬಿ ಜಿರಳಿ ಮಾತನಾಡಿದ, ಜನಪ್ರಿಯ ನಾಯಕ ಮೋದಿಯವರು ಚುನಾವಣಾ ಪ್ರಚಾರಕ್ಕೆ ರವಿವಾರ 28 ರಂದು ಬರುತ್ತಿದ್ದಾರೆ. ಎರಡು ಲಕ್ಷಕ್ಕೂ ಹೆಚ್ಚು ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಸೇರುತ್ತಾರೆ ಎಂದು ತಿಳಿಸಿದರು. ಈ ವೇಳೆ ಎಂಎಲ್ ಸಿ ಹನಮಂತ ನಿರಾಣಿ, ಮಾಜಿ ಶಾಸಕ ಸಂಜಯ ಪಾಟೀಲ್, ಬಿಜೆಪಿ ಮಹಾನಗರ ಅಧ್ಯಕ್ಷೆ ಗೀತಾ ಸುತಾರ ಬಿಜೆಪಿ ಗ್ರಾಮೀಣ ಜಿಲ್ಲಾದ್ಯಕ್ಷ ಶುಭಾಸ ಪಾಟೀಲ್, ಎಫ್ ಎಸ್ ಸಿದ್ದನಗೌಡ, ಹನಮಂತ ಕೊಂಗಾಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ನೇಹಾ ಹಿರೇಮಠ ಹತ್ಯೆ ಖಂಡಿಸಿ ಪ್ರತಿಭಟನೆ

(1 ನೇ ಪುಟದಿಂದ)

ಮಾಡಬೇಡಿ ಎಂದು ಈಗಾಗಲೆ ನೇಹಾ ತಂದೆ ನಿರಂಜನ ಹಿರೇಮಠ ಅವರು ಮನವಿ ಮಾಡಿದ್ದಾರೆ. ಎಲ್ಲ ಪಕ್ಷದವರೂ ತಮ್ಮ ಮನೆಗೆ ಬಂದು ಸಾಂತ್ವನ ಹೇಳಿದ್ದಾರೆ, ನ್ಯಾಯ ಕೊಡಿಸುವ ಭರವಸೆ ಸಿಕ್ಕಿದೆ ಎಂದು ಅವರು ಹೇಳಿದ್ದಾರೆ. ಇಷ್ಟಾದರೂ ಬಿಜೆಪಿಯವರು ಪ್ರಕರಣವನ್ನು ರಾಜಕೀಯಕ್ಕೆ ಬಳಸುತ್ತಿರುವುದನ್ನು ನಾವು ಖಂಡಿಸುತ್ತೇವೆ ಎಂದು ಚನ್ನರಾಜ ತಿಳಿಸಿದರು.ಸಾವಿನ ಮನೆಯಲ್ಲಿ ರಾಜಕೀಯ ಮಾಡುವ ಬಿಜೆಪಿಯ ಹಿಡನ್ ಅಜೆಂಡಾ ಯಶಸ್ವಿಯಾಗುವುದಿಲ್ಲ. ಜನರು ಎಲ್ಲವನ್ನೂ ಗಮನಿಸುತ್ತಿದ್ದಾರೆ. ಕುಟುಂಬಕ್ಕೆ ನ್ಯಾಯ ಸಿಗಬೇಕು. ಮುಂದೆ ಯಾರೂ ಇಂತಹ ಕೃತ್ಯಕ್ಕೆ ಇಳಿಯಬಾರದು ಎನ್ನುವುದು ನಮ್ಮ ಕಳಕಳಿ ಎಂದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಕೇವಲ ಬೇಜವಾಬ್ದಾರಿಯುತ ಭಾಷಣ ಮಾಡುವುದನ್ನು ಬಿಟ್ಟು, ದೇಶದಲ್ಲಿ ಮಹಿಳೆಯರ ರಕ್ಷಣೆಗೆ ಕಠಿಣ ಕಾನೂನು ತರಲಿ. ರಾಜ್ಯ ಸರಕಾರ ಕೈಗೊಂಡಂತೆ ವಿಶೇಷ ನ್ಯಾಯಾಲಯ ಸ್ಥಾಪನೆಯಂತಹ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿ ಎಂದು ಒತ್ತಾಯಿಸಿದರು.ಇಂತಹ ಕೃತ್ಯ ಯಾವ ಹೆಣ್ಣು ಮಗಳಿಗೂ ಆಗಬಾರದು. ಅಂತಹ ಶಿಕ್ಷೆ ಅಪರಾಧಿಗೆ ಆಗಬೇಕು. ಹಾಗಾಗಿ ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ. ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲಾಗಿದೆ. ಆದರೆ ಬಿಜೆಪಿಯವರನ್ನು ನೋಡಿದರೆ ಪಾಪ ಎನಿಸುತ್ತಿದೆ. ಚುನಾವಣೆಗೆ ಹೋಗಲು ಅವರ ಬಳಿ ವಿಷಯವಿಲ್ಲ. ಬರಗಾಲಕ್ಕೆ ಕೇಂದ್ರ ಪರಿಹಾರ ಕೊಡಲಿಲ್ಲ ಎಂದು ಜನರು ಅವರು ಹೋದಲ್ಲೆಲ್ಲ ಕೇಳುತ್ತಿದ್ದಾರೆ. ಹಾಗಾಗಿ ದಿಕ್ಕು ತೋಚದೆ ಹತಾಶ ಮನೋಭಾವದಿಂದ ಸಾವಿನ ಮನೆಯಲ್ಲಿ ರಾಜಕೀಯ ಮಾಡುತ್ತಿದ್ದಾರೆ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.

## ನರೇಂದ್ರ ಮೋದಿ ಮತ್ತು ಅಮಿತ್ ಶಾ ಕರ್ನಾಟಕವನ್ನು ಹಾಗೂ ರೈತರನ್ನು ದ್ವೇಷಿಸುತ್ತಾರೆ : ಸಿಎಂ ಸಿದ್ದರಾಮಯ್ಯ

(1 ನೇ ಪುಟದಿಂದ)

ರಾಜ್ಯಕ್ಕೆ ಮೇಲಿನಿಂದ ಮೇಲೆ ಬರಲು ಯಾವುದೇ ನೈತಿಕತೆ ಇಲ್ಲ ಎಂದು ಹೇಳಿ ಪ್ರತಿಭಟಿಸಿ ಅವರ ಗಮನಕ್ಕೆ ತರುವ ಕೆಲಸ ಮಾಡಿದ್ದೇವೆ ಎಂದರು. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ನೀಡುವುದಾಗಿ ನಿರ್ಮಲಾ ಸೀತಾರಾಮನ್ ಅವರು ತಮ್ಮ ಬಜೆಟ್ ನಲ್ಲಿಯೇ ಹೇಳಿದರು. ಬಜೆಟ್ ಸಂಸತ್ತಿನಲ್ಲಿ ಅನುಮೋದನೆಯಾಗಿದೆ. ಬೊಮ್ಮಾಯಿಯವರೂ ಕೂಡ ತಮ್ಮ ಬಜೆಟ್ ನಲ್ಲಿ ಧನ್ಯವಾದ ಹೇಳಿ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಮಾಡುವುದಾಗಿ ಹೇಳಿ ಇಂದಿನವರೆಗೆ ಯಾವುದೂ ಆಗಿಲ್ಲ. ಅದರ ಜೊತೆಗೆ 15 ನೆ ಹಣಕಾಸು ಆಯೋಗ 5495 ಕೋಟಿ ವಿಶೇಷ ಅನುದಾನವನ್ನು ಕೊಡಲಿಲ್ಲ. ಕೊಡದೇ ಈರಲು ಕಾರಣ ನಿರ್ಮಲಾ ಸೀತಾರಾಮನ್ ಹಾಗೂ ನರೇಂದ್ರ ಮೋದಿ ಅವರು. ಪೆರಿ ಫೆರಲ್ ರಿಂಗ್ ರೋಡ್ ಗೆ 3000 ಕೋಟಿ ಹಾಗು ಬೆಂಗಳೂರಿನ ಅಭಿವೃದ್ಧಿಗೆ 3000ಕೋಟಿ ಕೊಡಿ ಎಂದು ಶಿಫಾರಸು ಮಾಡಿದ್ದರೂ ಕೊಡಲಿಲ್ಲ. ಬರಪರಿಹಾರಕ್ಕೂ ಒಂದು ರೂ.ಇಲ್ಲ. ನರೇಂದ್ರ ಮೋದಿ ಅವರಿಗೆ ಕರ್ನಾಟಕ ನೆನಪಾಗುವುದು ಚುನಾವಣೆ ಸಂದರ್ಭದಲ್ಲಿ ಮಾತ್ರ. ಪ್ರವಾಹ, ಭೀಕರ ಬರಗಾಲದಲ್ಲಿ ಬರಲಿಲ್ಲ. ಕರ್ನಾಟಕದ ಮತದಾರರನ್ನು ಮತ ಕೇಳಲು ಬರುತ್ತಿದ್ದಾರೆ ಅದಕ್ಕಾಗಿ ಗೋ ಬ್ಯಾಕ್ ನರೇಂದ್ರ ಮೋದಿ, ಗೂ ಬ್ಯಾಕ್ ಅಮಿತ್ ಶಾ ಎಂದು ಹೇಳುತ್ತಿದ್ದೇವೆ ಎಂದರು.

ಇಂದು ಬರುತ್ತಿರುವ ಅಮಿತ್ ಶಾ ಅವರು ಸಭೆ ನಡೆಸಿ 18171 ಕೋಟಿ ಕೊಟ್ಟು ಆಮೇಲೆ ರಾಜ್ಯಕ್ಕೆ ಬರಲಿ. ನಮಗೆ ಯಾವುದೇ ಮತ ಕೇಳುವ ಹಕ್ಕು ಇಲ್ಲ ಎಂದು ಅವರಿಗೆ ಹೇಳುತ್ತೇವೆ. ನ್ಯಾಯಯುತ ಬೇಡಿಕೆ ಇಟ್ಟಿದ್ದೇವೆ ಎಂದರು.ರಾಜ್ಯ ಸರ್ಕಾರ ಅನಿವಾರ್ಯವಾಗಿ ಸುಪ್ರೀಂ ಕೋರ್ಟ್ ಕದ ತಟ್ಟಬೇಕಾದ ಪರಿಸ್ಥಿತಿ ಬಂತು. ಅಲ್ಲಿ ಅಟಾರ್ನಿ ಜನರಲ್ ಅವರು ನರೇಂದ್ರ ಮೋದಿ ಹಾಗೂ ನಿರ್ಮಲಾ ಸೀತಾರಾಮನ್ ಅವರು ಹೇಳಿದ ಸುಳ್ಳಿನ ಬಗ್ಗೆ ಪ್ರಸ್ತಾಪ ಮಾಡಲಿಲ್ಲ. ತೆರಿಗೆ ಅನ್ಯಾಯದ ಬಗ್ಗೆ ರಾಜ್ಯ ಸರ್ಕಾರ ಸೂಕ್ತವಾದ ಹಾಗೂ ಸತ್ಯಾಂಶವನ್ನು ಮಂಡಿಸಿದ್ದರಿಂದ ಕರ್ನಾಟಕದ ಮೇಲೆ ಕರುಣೆ ತೋರಿತು. ಸರ್ವೋಚ್ಚ ನ್ಯಾಯಾಲಯ ನಮ್ಮ ಪರವಾಗಿ ಕರುಣೆ ತೋರಿದೆ ಎಂದರು. ಒಂದು ವೇಳೆ ನಾವು ಸರ್ವೋಚ್ಚ ನ್ಯಾಯಾಲಯಕ್ಕೆ ಹೋಗದೇ ಹೋಗಿದ್ದರೆ ಒಂದು ರೂ.ಪರಿಹಾರ ನೀಡುತ್ತಿರಲಿಲ್ಲ ಎಂದರು.

ರಾಜ್ಯದ ಪರವಾಗಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ಅವರ ಭಾರತೀಯ ಚೆಂಬು ಪಕ್ಷದ ಸುಳ್ಳುಗಳನ್ನು ಜನತೆಗೆ ತೋರಿಸುತ್ತೇವೆ ಎಂದರು. ಈಗಾಗಲೇ ಸರ್ವೋಚ್ಚ ನ್ಯಾಯಾಲಯಕ್ಕೇ ಹೋಗಿದ್ದೇವೆ. ನ್ಯಾಯವನ್ನು ಕೇಳಲು ಜನತಾ ನ್ಯಾಯಾಲಯದ ಮೊರೆ ಹೋಗುತ್ತೇವೆ. ಮೋದಿ ಸರ್ಕಾರವನ್ನು ಕರ್ನಾಟಕದಿಂದ ಮಾತ್ರವಲ್ಲದೆ ಭಾರತದ ಇತರೆಡೆಗಳಿಂದಲೂ ಕಿತ್ತು ಹಾಕಲು ಪ್ರಯತ್ನಿಸುತ್ತೇವೆ ಎಂದು ರಂದೀಪ್ ಸುರ್ಜೇವಾಲ ಹೇಳಿದರು.

ರಾಜಕೀಯ ಸಂಘರ್ಷ ಮುಂದುವರೆದರೆ ರಾಜ್ಯಕ್ಕೆ ಬರಬೇಕಾದ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುವ ಸಾಧ್ಯತೆ ಇಲ್ಲವೇ ತೊಂದರೆಯಾಗುವುದಿಲ್ಲವೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ಹಾಗಾದರೆ ನ್ಯಾಯ ಕೊಡಲಿ. ಅನ್ಯಾಯ ಸಹಿಸಲು ಸಾಧ್ಯವಿಲ್ಲ ಎಂದರು.

ಪ್ರತಿಭಟನೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಂದೀಪ್ ಸುರ್ಜೇವಾಲಾ, ಸಚಿವರಾದ ಕೃಷ್ಣಭೈರೇಗೌಡ, ಕೆ.ಜೆ.ಜಾರ್ಜ್, ರಾಮಲಿಂಗಾರೆಡ್ಡಿ,ಬೈರತಿ ಸುರೇಶ್, ಉಪಸ್ಥಿತರಿದ್ದರು.

## ಎಪಿಎಂಸಿಯಲ್ಲಿ ಡಾ. ಬಸವರಾಜ ಮತಯಾಚನೆ



ಕೊಪ್ಪಳ: ನಗರದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ.ಶರಣಪ್ಪ ಅವರು ಪ್ರಚಾರ ಕಾರ್ಯ ಕೈಗೊಂಡು ವ್ಯಾಪಾರಸ್ಥರನ್ನು, ಕಾರ್ಮಿಕ ಸಮುದಾಯವನ್ನು ಭೇಟಿ ಮಾಡಿ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕೃಷಿ ಆರ್ಥಿಕತೆಗೆ ಉತ್ತೇಜನ, ಪ್ರಯಾಸ ಪಡುವ ಕಾರ್ಮಿಕರ ಜೀವನಕ್ಕೆ ಅನೇಕ ಯೋಜನೆಗಳನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಜಾರಿಗೆ ತಂದಿದ್ದಾರೆ ಎಂದರು.

ನಮ್ಮ ಬೆಂಬಲವಿರಲಿ ಎಂದಾಗ, "ನೀವು ಗೆಲ್ತೀರಿ, ಮೋದಿನೂ ಗೆಲ್ತಾರೆ, ನಮ್ಮ ಓಟು ನಮಗ" ಎಂಬ ಕಾರ್ಮಿಕರ ಮಾತುಗಳು ಗೆಲುವಿನ ವಿಶ್ವಾಸವನ್ನು ಇಮ್ಮಡಿಗೊಳಿಸಿದೆ. ಕಾರ್ಮಿಕ ಶ್ರೇಯೋಭಿವೃದ್ಧಿಯೇ ನನ್ನ ಸಂಕಲ್ಪವಾಗಿದೆ. ಬಿಜೆಪಿಗೆ ಮತ ಹಾಕುವ ಮೂಲಕ ಎಲ್ಲ ಜನರ ಸರ್ವಾಂಗೀಣ ಅಭಿವೃದ್ಧಿಗಾಗಿ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಮಂತ್ರಿ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಸೇರಿದಂತೆ ಪಕ್ಷದ ಪ್ರಮುಖರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಜೊತೆಗಿದ್ದರು.

## ಕಂಪ್ಲಿ: ಪಂಜಿನ ಮೆರವಣಿಗೆ ಮೂಲಕ ಮತದಾನ ಜಾಗೃತಿ




ಬಳ್ಳಾರಿ,ಏ.23:ಮತದಾನ ಮಾಡುವುದು ಎಲ್ಲರ ಕರ್ತವ್ಯವಾಗಿದ್ದು, ಮೇ 07 ರಂದು ನಡೆಯುವ ಲೋಕಸಭಾ ಚುನಾವಣೆಗೆ ತಪ್ಪದೇ ಮತದಾನ ಮಾಡಬೇಕು ಎಂದು ತಹಶೀಲ್ದಾರ ಶಿವರಾಜ ಅವರು ಹೇಳಿದರು.

ಚುನಾವಣೆ ಪರ್ವ ದೇಶದ ಗರ್ವ ಎನ್ನುವ ಚುನಾವಣೆ ಆಯೋಗದ ಸಂದೇಶದೊಂದಿಗೆ ಕಂಪ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಪುರಸಭೆ ಕಾರ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಮತದಾನ ಜಾಗೃತಿ ಅಂಗವಾಗಿ ಸೋಮವಾರದಂದು ಕಂಪ್ಲಿ ಪುರಸಭೆ ಕಚೇರಿಯಿಂದ ಹಮ್ಮಿಕೊಂಡಿದ್ದ ಪಂಜಿನ ಮೆರವಣಿಗೆ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು. ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಶ್ರೀಕುಮಾರ್ ಅವರು ಮಾತನಾಡಿ, ಮತ ಎನ್ನುವುದು ಮಾರಾಟಕ್ಕಿಲ್ಲ, ಯಾವುದೇ ಆಮಿಷಗಳಿಗೆ ಬಲಿಯಾಗದೇ ನಿರ್ಭೀತರಾಗಿ ಮತ ಚಲಾಯಿಸಿ ಎಂದು ತಿಳಿಸಿದರು. ಚುನಾವಣೆ ಸಂದೇಶಗಳ ಜಾಗೃತಿ ಫಲಕಗಳ ಮೂಲಕ ಪಂಜಿನ ಮೆರವಣಿಗೆಯು ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಪ್ರಾರಂಭವಾಗಿ ನಡವಲ ಮಸೀದಿ, ತರಕಾರಿ ಮಾರುಕಟ್ಟೆ, ಸಣಾಪುರ ರಸ್ತೆ, ಶ್ರೀ ಸತ್ಯನಾರಾಯಣಪೇಟೆ, ಶಿಬಿರದಿನ್ನಿ, ನಂ.10 ಮುದ್ದಾಪುರ ಮಾರ್ಗವಾಗಿ ಹೊಸಪೇಟೆ ರಸ್ತೆಯಿಂದ ಮರಳಿ ಅಂಬೇಡ್ಕರ್ ವೃತ್ತಕ್ಕೆ ಬಂದು ಮತದಾರರ ಪ್ರತಿಜ್ಞಾವಿಧಿ ಸ್ವೀಕರಿಸುವ ಮೂಲಕ ಅಂತ್ಯಗೊಂಡಿತು.ಈ ವೇಳೆ ಪುರಸಭೆ ಮುಖ್ಯಾಧಿಕಾರಿ ರೆಡ್ಡಿ ರಾಯನಗೌಡ, ಗ್ರಾಮೀಣ ಉದ್ಯೋಗ ಖಾತರಿಯ ಸಹಾಯಕ ನಿರ್ದೇಶಕ ಮಲ್ಲನಗೌಡ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಇತರರು ಭಾಗವಹಿಸಿದ್ದರು.

## ಮಿನೆರಾ ಕಾರ್ಖಾನೆಯಲ್ಲಿ ಕಾರ್ಮಿಕರಿಗೆ ಮತದಾನ ಜಾಗೃತಿ

(1 ನೇ ಪುಟದಿಂದ)

ಮತದಾನ ಸಂಭ್ರಮವಾದಾಗ ಮಾತ್ರ ದೇಶ ಬದಲಾಗುತ್ತದೆ. ಎಲ್ಲರೂ ಮತದಾನ ಮಾಡುವ ಮೂಲಕ ನಮ್ಮ ಹಕ್ಕನ್ನು ಚಲಾಯಿಸಿ ಎಂದು ಕರೆ ನೀಡಿದರು.

ನಮ್ಮ ಮತ- ನಮ್ಮ ಹಕ್ಕಾಗಿದ್ದು, ನಮ್ಮ ಒಂದು ಮತದಿಂದ ದೇಶದ ಭವಿಷ್ಯ ಅಡಗಿದೆ. ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಸಾಮಾನ್ಯ ಪ್ರಜೆಗಳು ಮತದಾನ ಮಾಡುವ ಮೂಲಕ ದೇಶದ ಸುಭದ್ರವಾದ ಸರ್ಕಾರವನ್ನು ನಿರ್ಮಿಸಬಹುದಾಗಿದೆ ಎಂದು ತಿಳಿಸಿದರು.

ಕೈಗಾರಿಕೆಗಳಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿಯು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಕೆಲಸದ ಒತ್ತಡದಿಂದ ಮತದಾನ ದಿನದಂದು ಯಾರೂ ಹೊರಗುಳಿಯುವಂತಿಲ್ಲ. ಚುನಾವಣಾ ಆಯೋಗವು ಮೇ 07 ವೇತನ ಸಹಿತ ರಜೆ ನೀಡಿದೆ ಎಂದರು. ಇದೇ ವೇಳೆ ಮೇ 07 ರಂದು ಕಡ್ಡಾಯವಾಗಿ ಮತದಾನ ಮಾಡುತ್ತೇನೆ ಎಂದು ಮತದಾರರ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಸಂಡೂರು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ, ತಾಪಂ ಇಒ ಷಡಕ್ಷರಯ್ಯ, ಮಿನೇರಾ ಸ್ಟೀಲ್ಸ್ ಮತ್ತು ಪವರ್ ಪ್ರೈ ಲಿಮಿಟೆಡ್‌ನ ನಿರ್ದೇಶಕ ಹನುಮಂತ ರೆಡ್ಡಿ, ಗಿರೀಶ್ ಕುಮಾರ್, ತೋರಣಗಲ್ಲು ಗ್ರಾಪಂ ಅಧಿಕಾರಿ ಎಂ.ಸಿದ್ದಲಿಂಗಸ್ವಾಮಿ, ತಾಲ್ಲೂಕು ಐಇಸಿ ಸಂಯೋಜಕ ಯಂಕಪ್ಪ ಸೇರಿದಂತೆ ಗ್ರಾಪಂ ಸಿಬ್ಬಂದಿಗಳು ಹಾಗೂ 400 ಕಾರ್ಮಿಕರು ಹಾಜರಿದ್ದರು.

## ವ್ಯಕ್ತಿ ಕಾಣೆ; ಪತ್ತೆಗೆ ಮನವಿ

ಬಳ್ಳಾರಿ,ಏ.23: ನಗರದ ತಾಳೂರು ರಸ್ತೆಯ ನಿವಾಸಿ ಬಿ.ಅರವಿಂದ ಎನ್ನುವ 29 ವರ್ಷದ ವ್ಯಕ್ತಿ ಏ.17 ರಂದು ಕಾಣೆಯಾಗಿರುವ ಕುರಿತು ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಠಾಣಾಧಿಕಾರಿಗಳು ಮನವಿ ಮಾಡಿದ್ದಾರೆ.



ಚಹರೆ ಗುರುತು:

ಎತ್ತರ 06 ಅಡಿ, ಕೋಲು ಮುಖ, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ, ತೆಲುಗು ಮತ್ತು ಹಿಂದಿ ಭಾಷೆ ಮಾತನಾಡುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಹಸಿರು ಬಣ್ಣದ ಆಫ್ ಟಿ-ಶರ್ಟ್, ನೀಲಿ ಬಣ್ಣದ ಬರ್ಮೋಡಾ ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆತಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆ ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ:08392258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.